<u>ದಿನಾಂಕಃ **25/06/2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>
<u>ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ</u>

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದಿರುವ ಅಂಶಗಳು ಸತ್ಯವಾಗಿದೆ. ಅದನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿದ್ದು, ಅದರಲ್ಲಿ ನನ್ನ ಸಹಿ ಇದೆ.

1. ದಿಃ 12.12.2025 ರಂದು ವಾದಿ ಲೋಕೇಶ ರವರ ಹೆಸರಿಗೆ ಬರೆದು ಕೊಟ್ಟಿರುವ ವಿಶೇಷ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2. ದಿಃ 27.07.2022 ರಂದು ಬರೆದು ಕೊಟ್ಟಿರುವ ಹಕ್ಕು ಖುಲಾಸೆ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.
3. ಸ. ನಂ. 21/3 ರ ಆರ್.ಟಿ.ಸಿ. ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.
4. ಸ. ನಂ. 21/3 ರ ಆರ್.ಟಿ.ಸಿ. ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.
5. ಸರಕಾರಿ ಬಾಕಿ ಪಾವತಿಯ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.
6. ದಿಃ 13.03.2024 ರಂದು ತಹಸೀಲ್ದಾರವರಿಗೆ ನೀಡಿದ ದೂರಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.
7. ಹದ್ದು ಬಸ್ತು ನಕ್ಷೆಯನ್ನು ಹಾಜರುಪಡಿಸಿದ್ದು ಅದನ್ನು ಪ್ರತಿವಾದಿ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ-7 ಎಂದು ಗುರುತಿಸಲಾಯಿತು.

(ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದರಿಂದ ಮುಂದೂಡಲಾಯಿತು).

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನದ ಪ್ರಕಾರ ಬೆರಳಚ್ಚು ಮಾಡಲಾಯಿತು)
ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.)

1 ನೇ ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.
ಪಿರಿಯಾಪಟ್ಟಣ.